**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 2779/2022**

**ಸಾಕ್ಷಿಗೆ ದಿನಾಂಕ 3.6.2025 ರಂದು ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ದೇವೆಂದ್ರ | ಪಿ.ಡಬ್ಲ್ಯೂ-6 |
| ತಂದೆಯ/ಗಂಡನ ಹೆಸರು | : | ಸಣ್ಣಪುಟ್ಟಯ್ಯ | ಸಿ.ಡಬ್ಲ್ಯೂ-6 |
| ವಯಸ್ಸು | : | 45 | |
| ಉದ್ಯೋಗ | : | ಕೂಲಿ | |
| ವಾಸಸ್ಥಳ | : | ಕುರ್ಣೇಗಾಲ | |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಅಪಘಾತದ ಬಗ್ಗೆ ನನಗೆ ನನ್ನ ಮಗನಾದ ಚಾಸ 5 ರವರು ತಿಳಿಸಿರುತ್ತಾರೆ. ಅಪಘಾತಕ್ಕೆ ಒಳಗಾದವರು ನನ್ನ ಅಳಿಯನಾಗಬೇಕು. ಸುಮಾರು 3 ವರ್ಷದ ಹಿಂದೆ ನನ್ನ ಅಳಿಯಾನಾದ ಚಾಸ 1 ರವರು ಯಾವುದೋ ಒಂದು ಕಾರ್ಯಕ್ರಮದಲ್ಲಿ ಭಾಗವಹಿಸಿ ಕುರ್ಣೆಗಾಲದ ನಮ್ಮ ಮನೆಗೆ ಬೈಕಿನಲ್ಲಿ ಬರುತ್ತಿರುವಾಗ ಚನ್ನಗುಂಡಿ ಬಳಿ ಎದುರುಗಡೆಯಿಂದ ಆರೋಪಿಯಾದ ರೇವಪ್ಪನವರು ನನ್ನ ಅಳಿಯ ಚಲಾಯಿಸುತ್ತಿದ್ದ ಬೈಕಿಗೆ ಗುದ್ದಿ ಅಪಘಾತಪಡಿಸಿರುತ್ತಾರೆ. ನಂತರ ನನ್ನ ಅಳಿಯನನ್ನು ವಿವೇಕಾನಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ನಂತರ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕರೆದುಕೊಂಡು ಹೋಗಲಾಗಿರುತ್ತದೆ. ನಂತರ ಚಾಸ 1 ರವರು ದೂರನ್ನು ಬರೆದುಕೊಟ್ಟಿದ್ದು ಅದನ್ನು ನಾನು ಸರಗೂರು ಠಾಣೆಗೆ ನೀಡಿರುತ್ತೇನೆ. ದೂರು ನೀಡಿದ 6 ದಿನಗಳ ನಂತರ ಪೋಲಿಸರು ಘಟನ ಸ್ಥಳಕ್ಕೆ ಬಂದಿರುತ್ತಾರೆ. ನಂತರ ನನ್ನನ್ನು ಸ್ಥಳಕ್ಕೆ ಕರೆಸಿ ಪಂಚನಾಮೆಯನ್ನು ಜರುಗಿಸಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಸದರಿ ಸಮಯದಲ್ಲಿ ಚಾಸ 2 ರವರು ಸಹ ಹಾಜರಿದ್ದರು. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲಾತಿಯು ಕೃತ್ಯ ನಡೆದ ಸ್ಥಳದ ಮಹಜರ್ ಆಗಿದ್ದು ಅದನ್ನು ನಿಪಿ7 ಎಂದು, ಸಾಕ್ಷಿಯ ಸಹಿಯನ್ನು ನಿಪಿ7 ಎ ಎಂದು ಗುರುತಿಸಲಾಯಿತು. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ.

(ಈ ಹಂತದಲ್ಲಿ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ನೀಡಲಾಯಿತು.)

**ಪಾಟೀಸವಾಲುಃ ಎಪಿಪಿ ರವರಿಂದಃ**

ದಿನಾಂಕ 2.3.2021ರಂದು ದೂರು ನೀಡಿದ ದಿನವೇ ಪೋಲಿಸರು ಕೃತ್ಯ ನಡೆದ ಸ್ಥಳಕ್ಕೆ ಬಂದು ಬೆಳಿಗ್ಗೆ 10.30 ರಿಂದ 11.30 ರವರೆಗೆ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಕೆ.ಎಸ್.ಎಂ ವಕೀಲರಿಂದಃ**

ಅಪಘಾತ ಯಾವ ದಿನಾಂಕ, ವರ್ಷದಂದು ಆಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ಆ ಸಮಯದಲ್ಲಿ ನಾನು ಗಾರೆ ಕೆಲಸ ಮಾಡುತ್ತಿದ್ದೆ. ಅಪಘಾತವಾದ ಸ್ಥಳವು ಏರುಮುಖವಾಗಿರುತ್ತದೆ ಎಂದರೆ ಸರಿ. ಅಪಘಾತವು ಆರೋಪಿಯ ನಿರ್ಲಕ್ಷ್ಯತನದಿಂದ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತಪಡಿಸಿದ ವಾಹನದ ನೊಂದಣಿ ಸಂಖ್ಯೆ ನನಗೆ ತಿಳಿದಿರುವುದಿಲ್ಲ. ಮಹಜರಿನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ನನ್ನ ಅಳಿಯ ಚಾಸ 1 ರವರು ಚಾಮರಾಜನಗರ ನ್ಯಾಯಾಲಯದಲ್ಲಿ ಅಪಘಾತ ಪರಿಹಾರ ಕೋರಿ ಅರ್ಜಿ ಸಲ್ಲಿಸಿರುತ್ತಾರೆ ಎಂದರೆ ಸರಿ. ಸದರಿ ಅರ್ಜಿಗೆ ಅನುಕೂಲವಾಗಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ